**ನಿಧನ ವಾರ್ತೆ**

# ಮೀರ್ ಅಜೀಜ್ ಅಹಮದ್

ಪ್ರ.ವಾ 1/12/18



ಶಿವಮೊಗ್ಗ: ಹಿರಿಯ ಕಾಂಗ್ರೆಸ್ ಮುಖಂಡ, ವಿಧಾನ ಪರಿಷತ್ ಮಾಜಿ ಸದಸ್ಯ ಮೀರ್ ಅಜೀಜ್ ಅಹಮದ್ (86) ಶುಕ್ರವಾರ ಬೆಳಿಗ್ಗೆ 4.30ಕ್ಕೆ ಬೆಂಗಳೂರಿನ ವಿಕ್ರಂ ಆಸ್ಪತ್ರೆಯಲ್ಲಿ ನಿಧನರಾದರು.

ಶಿವಮೊಗ್ಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ, ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ, ವಕ್ಫ್ ಬೋರ್ಡ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್‌ಗೆ 2003ರಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಎಚ್.ಎಸ್. ಶಾಂತವೀರಪ್ಪ ಗೌಡ ವಿರುದ್ಧ ಗೆಲುವು ಸಾಧಿಸಿದ್ದರು. ಸಾರಿಗೆ ಸಂಸ್ಥೆಯ ಮಾಲೀಕರಾಗಿಯೂ ಯಶಸ್ವಿಯಾಗಿದ್ದರು. ಅವರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ.